ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಕೆ. ಆರ್. ವೃತ್ತ, ಬೆಂಗಳೂರು-560 001

ಸಂಖ್ಯೆ:ಸಿ8[3]ಶಾಶಿಅ:ಮಾ.ನ.ಸುತ್ತೋಲೆ/169/2019-20. ದಿನಾಂಕ: 17.10.2019

## -:ಸುತ್ತೋಲೆ:-

ವಿಷಯ:- ರಾಜ್ಯದಲ್ಲಿನ ಖಾಸಗಿ ಅನುದಾನಿತ/ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ದಾಖಲಾತಿ/ಹಾಜರಾತಿ ಕನಿಷ್ಠಕ್ಕಿಂತ ಕಡಿಮೆ ಇರುವ ಶಾಲೆಗಳಿಗೆ ಮಾನ್ಯತೆ ನವೀಕರಿಸುವ ಬಗ್ಗೆ.

ಉಲ್ಲೇಖ:-
1. ಕರ್ನಾಟಕ ಶಿಕ್ಷಣ ಕಾಯ್ದೆ 1983 ಕರ್ನಾಟಕ ಶಿಕ್ಷಣ ಸಂಸ್ಥೆಗಳು [ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಂಸ್ಥೆಗಳ ಮಾನ್ಯತೆ ನಿಯಮಗಳು 1999 ನಿಯಮ-99[4][ಕೆ]
2. ಸರ್ಕಾರದ ಆದೇಶ ಸಂಖ್ಯೆ: ಇಡಿ 324 ಎಸ್‌ಎಲ್‌ಬಿ 2015 ದಿನಾಂಕ: 29.10.2015
3. ಈ ಕಛೇರಿ ಸುತ್ತೋಲೆ ಸಂಖ್ಯೆ: ಸಿ8[7] ಶಾಶಿಅ. ಮಾನ್ಯತೆ ನವೀಕರಣ :01/2015-16. ದಿನಾಂಕ:27.11.2015.
4. ಸರ್ಕಾರದ ಸುತ್ತೋಲೆ ದಿನಾಂಕ: 02.11.2016
5. ಈ ಕಛೇರಿ ಸುತ್ತೋಲೆ ಸಂಖ್ಯೆ: ಸಿ8[7] ಶಾಶಿಅ/ಅಧಿಕ ವಿಭಾಗ]/2001-02.ದಿನಾಂಕ: 17.08.2002.
6. ಈ ಕಛೇರಿ ಸಮ ಸಂಖ್ಯೆ ಸುತ್ತೋಲೆ ದಿನಾಂಕ: 03.08.2017.
7. ಉಪನಿರ್ದೇಶಕರು,ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ದಕ್ಷಿಣ ಇವರ ಪತ್ರ ದಿನಾಂಕ:20.07.2019.

-----****-----

ರಾಜ್ಯದಲ್ಲಿನ ಅನುದಾನಿತ ಪ್ರಾಥಮಿಕ/ಪ್ರೌಢಶಾಲೆಗಳ ಮಾನ್ಯತೆ ನವೀಕರಣ ವಿಚಾರವಾಗಿ ಕರ್ನಾಟಕ ಶಿಕ್ಷಣ ಕಾಯ್ದೆ 1983ರ ಕರ್ನಾಟಕ ಶಿಕ್ಷಣ ಸಂಸ್ಥೆಗಳು [ಪ್ರಾಥಮಿಕ/ಪ್ರೌಢಶಿಕ್ಷಣ] ಮಾನ್ಯತೆ ನಿಯಮಗಳು-1999, ನಿಯಮ 3[1]ರಂತೆ ಖಾಸಗಿ ಶಿಕ್ಷಣ ಸಂಸ್ಥೆಗಳು ನಿಗಧಿತ ಕಾಲಕ್ಕೆ ಮಾನ್ಯತೆ ನವೀಕರಣ ಪಡೆಯುವುದು ಕಡ್ಡಾಯವಾಗಿರುತ್ತದೆ ಮತ್ತು ನಿಯಮ 4[1][ಕೆ] ರಂತೆ ವಿದ್ಯಾರ್ಥಿಗಳು ಕನಿಷ್ಠ 25 ಹಾಜರಾತಿಯನ್ನು ಕಾಯ್ದುಕೊಳ್ಳುವುದು ಸಹ ಕಡ್ಡಾಯವಾಗಿರುತ್ತದೆ.

ಕರ್ನಾಟಕ ಶಿಕ್ಷಣ ಕಾಯ್ದೆ 1983ರ ನಿಯಮ 36ರಡಿಯಲ್ಲಿ ಖಾಸಗಿ ಅನುದಾನಿತ/ಅನುದಾನ ರಹಿತ ಪ್ರೌಢಶಾಲೆಗಳ ಮಾನ್ಯತೆ ನವೀಕರಣ ಪ್ರಾಧಿಕಾರಿಗಳು ಸಂಬಂಧಪಟ್ಟ ಆಯಾ ಜಿಲ್ಲಾ ಉಪನಿರ್ದೇಶಕರಾಗಿರುತ್ತಾರೆ ಕೆಲವು ಅನುದಾನ ರಹಿತ/ಸಹಿತ ಪ್ರೌಢಶಾಲೆಗಳಿಗೆ ಮಾನ್ಯತೆ ನವೀಕರಣ ಪಡೆಯದೇ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ ಹಾಜರಾಗಲು ಕಷ್ಟ ಸಾದ್ಯವಾಗಿರುತ್ತದೆ.

### ಅನುದಾನಿತ ಪ್ರೌಢ ಶಾಲೆಗಳ ಬಗ್ಗೆ:-

ಅನುದಾನಿತ ಪ್ರೌಢ ಶಾಲೆಗಳಿಗೆ ಸಂಬಂಧಿಸಿದಂತೆ ಜಿಲ್ಲಾ ಮಟ್ಟದಲ್ಲಿನ ಖಾಸಗಿ ಅರ್ಹ ಅನುದಾನಿತ ಪ್ರೌಢಶಾಲೆಗಳಲ್ಲಿ ಮಾನ್ಯತೆ ನವೀಕರಣ ಆಗದೇ ಇರುವ ಶಾಲೆಗಳನ್ನು ಪಟ್ಟಿ ಮಾಡಿ ಅಂತಹ ಪ್ರೌಢಶಾಲೆಗಳಿಗೆ ಮಾನ್ಯತೆ ನವೀಕರಣವನ್ನು ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ವಿದ್ಯಾರ್ಥಿಗಳು ಹಾಜರಾಗಲು ಯಾವುದೇ ತೊಂದರೆಯಾಗದಂತೆ ಕಡ್ಡಾಯವಾಗಿ ಮಾಡತಕ್ಕದ್ದು. ಇದಲ್ಲದೆ ಮೇಲ್ಕಂಡ ನಿಯಮಮಗಳಡಿಯಲ್ಲಿ ವಿದ್ಯಾರ್ಥಿಗಳ ನಿಗಧಿತ ಸಂಖ್ಯಾಬಲವನ್ನು ಕಾಯ್ದುಕೊಳ್ಳದ ಅನುದಾನಿತ ಪ್ರೌಢ ಶಾಲೆಗಳಿಗೆ ಕರ್ನಾಟ ಶಿಕ್ಷಣ ಕಾಯಿದೆ 1983ರ

ಅನ್ವಯವಾಗುವ ನಿಯಮಗಳಡಿಯಲ್ಲಿ ನೋಟೀಸ್ ಜಾರಿ ಮಾಡಿ ಮಾನ್ಯತೆಯನ್ನು ಹಿಂಪಡೆಯಲು ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಪ್ರಸ್ತಾವನೆಯನ್ನು ಸಲ್ಲಿಸಲು ಆಯಾ ಜಿಲ್ಲಾ ಉಪನಿರ್ದೇಶಕರು ಕ್ರಮವಹಿಸತಕ್ಕದ್ದು.

**ಅನುದಾನರಹಿತ ಪ್ರೌಢ ಶಾಲೆಗಳ ಬಗ್ಗೆ:-**

ಖಾಸಗಿ ಅನುದಾನ ರಹಿತ ಪ್ರೌಢಶಾಲೆಗಳಿಗೆ ಸಂಬಂಧಿಸಿದಂತೆ ಸದರಿ ಶಾಲೆಗಳಲ್ಲಿನ ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ ಪರೀಕ್ಷೆಯಿಂದ ವಂಚಿತರಾಗಬಾರದೆಂಬ ದೃಷ್ಠಿಯಿಂದ ಮಾನ್ಯತೆ ನಿಯಮಗಳ ಎಲ್ಲಾ ಷರತ್ತುಗಳನ್ನು ಪೂರೈಸಿರುವುದನ್ನು ಖಚಿತಪಡಿಸಿಕೊಂಡು ಪ್ರತಿ ತರಗತಿಯಲ್ಲಿ ವಿದ್ಯಾರ್ಥಿಗಳ ಕನಿಷ್ಠ 25 ಸಂಖ್ಯೆಗೆ ವಿನಾಯಿತಿ ನೀಡಿ 2019-20ನೇ ಸಾಲಿಗೆ ಮಾತ್ರ ಅನ್ವಯಿಸುವಂತೆ ಮಾನ್ಯತೆ ನವೀಕರಣ ಮಾಡಲು ಜಿಲ್ಲಾ ಉಪನಿರ್ದೇಶಕರಿಗೆ ಅನುಮತಿ ನೀಡಲಾಗಿದೆ. ಅದರಂತೆ ನಿಯಮಾನುಸಾರ ಕ್ರಮವಹಿಸಲು ತಿಳಿಸಿದೆ.

ಆದರೆ ಅನೇಕ ಜಿಲ್ಲಾ ಉಪನಿರ್ದೇಶಕರು ಅನುದಾನಿತ ಪ್ರೌಢಶಾಲೆಗಳಲ್ಲಿ ನಿಗಧಿತ ಹಾಜರಾತಿ ಇಲ್ಲದಿದ್ದಲ್ಲಿ ಕೂಡಲೇ ಆಯುಕ್ತರ ಕಛೇರಿಗೆ ಪ್ರಸ್ತಾವನೆ ಸಲ್ಲಿಸಿ ನಿಯಮಾನುಸಾರ, ಕರ್ನಾಟಕ ಶಿಕ್ಷಣ ಕಾಯಿದೆ 1983 ನಿಯಮ-39ರಡಿ ನೊಟೀಸ್ ನೀಡುವ ಕ್ರಮ ಪಾಲನೆಯಾಗದೇ ಇರುವುದು ಇಲಾಖೆಯ ಗಮನಕ್ಕೆ ಬಂದಿರುತ್ತದೆ. ಇದನ್ನು ಗಂಭೀರವಾಗಿ ಪರಿಗಣಿಸಿದೆ.

[ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಂದ ಅನುಮೋದಿಸಲ್ಪಟ್ಟಿದೆ]

ನಿರ್ದೇಶಕರು[ಪ್ರೌಢ ಶಿಕ್ಷಣ]
ಸಾರ್ವಜನಿಕ ಶಿಕ್ಷಣ ಇಲಾಖೆ,
ಬೆಂಗಳೂರು

**ಇವರಿಗೆ**

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿ
2. ನಿರ್ದೇಶಕರು, ಅಪರ ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿ ರವರಿಗೆ ಕಳುಹಿಸುತ್ತಾ, ನಿಮ್ಮ ವ್ಯಾಪ್ತಿಯಲ್ಲಿ ಬರುವ ಶಾಲೆಗಳ ಮಾನ್ಯತೆ ನವೀಕರಣದ ಬಗ್ಗೆ ಕ್ರಮ ಕೈಗೊಂಡು ನಿಗಧಿತ ನಮೂನೆಯಲ್ಲಿ ಮಾಹಿತಿ ನೀಡಲು ಕ್ರಮ ವಹಿಸಲು ಕೋರಿದೆ.
3. ನಿರ್ದೇಶಕರು[ಪರೀಕ್ಷೆಗಳು], ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು
4. ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು
5. ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು.
6. ಕಛೇರಿ ಪ್ರತಿ

\\10.96.135.73\F drive\sslc exam.doc